**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಓ ಎಸ್ 65/2023**

**ಅರ್ಜಿಯನ್ನು ಪುರಸ್ಕರಿಸಿದ ಮೇರೆಗೆ ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ದಿನಾಂಕಃ** 09-12-2025 **ಡಿ ಡಬ್ಲ್ಯೂ** 2

**ಪಾಟೀ ಸವಾಲುಃ** ವಾದಿಯರ ಪರ ಶ್ರೀ ಟಿ ಎ ಪಿ ವಕೀಲರಿಂದಃ

ನಾನು 7 ನೇ ತರಗತಿವರೆಗೆ ವಿದ್ಯಾಭ್ಯಾಸ ಮಾಡಿದ್ದೇನೆ. ವಾದಿಯರು ದಾವೆಯನ್ನು ದಾವಾ ಆಸ್ತಿ ಅವರದ್ದು ಎಂದು ದಾವೆ ಸಲ್ಲಿಸಿದ್ದಾರೆ. ಪ್ರಸ್ತುತ ದಾವೆಯನ್ನು ವಾದಿ ಬನ್ನಿಕೋಡು ಗ್ರಾಮದ ಸರ್ವೆ ನಂ. 135/3 ರಲ್ಲಿ 5 ಎಕರೆ 7 ಗುಂಟೆ ಜಮೀನಿಗೆ ಸಂಬಂದಿಸಿದಂತೆ ಸಲ್ಲಿಸಿರುತ್ತಾರೆ. ಸದರಿ ಆಸ್ತಿಯ ಚೆಕ್ ಬಂದಿ ನನಗೆ ಗೊತ್ತಿಲ್ಲ. ನಾನು ವ್ಯವಸಾಯ ಮಾಡುತ್ತೇನೆ. ಈ ಹಿಂದೆ ನಾನು ಗ್ರಾಮ ಪಂಚಾಯ್ತಿಯ ಸದಸ್ಯನಾಗಿದ್ದೆನು ಆದರೆ ಈಗ ಇಲ್ಲ. ಪ್ರಸ್ತುತ ಹಾಲಿನ ಡೈರಿ ಸದಸ್ಯನಾಗಿರುತ್ತೇನೆ. ನನಗೆ ಹಾಗೂ ವಾದಿಯರಿಗೆ ಮತದಾನದ ವಿಚಾರವಾಗಿ ವೈಮನಸ್ಸು ಇದೆ ಎಂದರೆ ಸರಿಯಲ್ಲ. ಪ್ರತಿವಾದಿ ಕಾಡಸಿದ್ದಪ್ಪ ನನಗೆ ಪರಿಚಯ. ನನಗೆ ಇಬ್ಬರು ತಮ್ಮಂದಿರು ಮತ್ತು ಒಬ್ಬ ಅಣ್ಣ. ತಮ್ಮಂದಿರ ಹೆಸರು ನಾಗರಾಜ ಮತ್ತು ಶಿವರಾಜ. ಪ್ರತಿವಾದಿ 1 ರವರ ಮಗನಿಗೆ ನನ್ನ ಮಗಳನ್ನು ಮದುವೆ ಮಾಡಿಕೊಟ್ಟಿದ್ದೇವೆ ಎಂದರೆ ಸರಿಯಲ್ಲ. ನನ್ನ ಚಿಕ್ಕಪ್ಪನ ಮಗ 1 ನೇ ಪ್ರತಿವಾದಿಯ ಮಗಳನ್ನು ಮದುವೆಯಾಗಿದ್ದಾನೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರಕ್ಕೆ ನಾನೇ ಮಾಹಿತಿ ನೀಡಿರುತ್ತೇನೆ. ಪ್ರತಿವಾದಿಯರ ಮೂಲ ಕುಟುಂಬದ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿ. ವಾದಿ ಮತ್ತು ಪ್ರತಿವಾದಿಯರ ತಂದೆ ತಾಯಿಗಳ ಬಗ್ಗೆ ಮಾತ್ರ ನನಗೆ ಗೊತ್ತಿರುತ್ತದೆ. ಅವರ ಪೂರ್ವಜರ ಬಗ್ಗೆ ಮಾಹಿತಿ ಇರುವುದಿಲ್ಲ. ದಾವಾ ಆಸ್ತಿಯ ಉತ್ತರ ದಿಕ್ಕಿಗೆ ನನ್ನ ಜಮೀನು ಇದೆ. ನನ್ನ ಜಮೀನಿನ ಸರ್ವೆ ನಂ.3/4. ಸದರಿ ಜಮೀನು ನನ್ನ ಹೆಸರಿಗೆ ಇದೆ. ಈ ಬಗ್ಗೆ ದಾಖಲೆಗಳನ್ನು ಸಲ್ಲಿಸಿಲ್ಲ ಎಂದರೆ ಸರಿ. ದಾವಾ ಆಸ್ತಿ ಮೂಲತಃ ವಾದಿಯರ ಅಜ್ಜನ ಆಸ್ತಿ ಎಂದರೆ ನನಗೆ ಗೊತ್ತಿಲ್ಲ. ಅವರ ಅಜ್ಜನ ಆಸ್ತಿಯಾಗಿದ್ದರಿಂದ ಅವರ ಹೆಸರಿಗೆ ಖಾತೆ ಬದಲಾವಣೆ ಆಗಿದೆ ಎಂದರೆ ನನಗೆ ಗೊತ್ತಿಲ್ಲ. ವಾದಿಯರು ಸಲ್ಲಿಸಿದ ದಾಖಲೆಗಳ ಬಗ್ಗೆ ನಾನು ತಿಳಿದುಕೊಂಡಿಲ್ಲ. ದಾವಾ ಆಸ್ತಿಯನ್ನು ವಾದಿಯರೆ ಉಳುಮೆ ಮಾಡುತ್ತಾ ಬಂದಿದ್ದಾರೆ ಎಂದರೆ ಸಾಕ್ಷಿಯು ಅದು ಬೀಳು ಇದೆ ಎಂದು ನುಡಿಯುತ್ತಾರೆ. ದಾವಾ ಆಸ್ತಿಗೆ ಸಂಬಂದಿಸಿದಂತೆ ವಾದಿ ಹಾಗೂ ಪ್ರತಿವಾದಿಯರ ನಡುವೆ ಆಗಾಗ ಜಗಳ ಆಗುತ್ತವೆ ಎಂದರೆ ನನಗೆ ಗೊತ್ತಿಲ್ಲ. ಜಗಳವಾದ ವಿಚಾರ ನನಗೆ ಗೊತ್ತಿದ್ದರೂ ಸಹ ಈ ರೀತಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಯರು ನನ್ನ ಸಂಬಂಧಿಕರಾಗಿರುವುದರಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ನನ್ನ ಮುಖ್ಯ ವಿಚಾರಣೆಯಲ್ಲಿ ಪ್ರತಿವಾದಿ 2 ರಿಂದ 4 ರವರು 1997 ರಲ್ಲಿ ಪಾಲು ವಿಭಾಗ ಮಾಡಿಕೊಂಡಿದ್ದಾರೆ ಎಂದು ಹೇಳಿದ್ದು ಸದರಿ ಸಂದರ್ಭದಲ್ಲಿ ನಾನು ಹಾಜರಿರಲಿಲ್ಲ. ಪಾಲು ವಿಭಾಗ ಪತ್ರದಲ್ಲಿ ಯಾರು ಯಾರು ಎಷ್ಟು ಎಷ್ಟು ಹಿಸ್ಸೆಯನ್ನು ಪಾಲು ಮಾಡಿಕೊಂಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ನನಗೆ ಈಗ 43-45 ವರ್ಷ ವಯಸ್ಸು. ದಾವಾ ಆಸ್ತಿಯನ್ನು ಪ್ರತಿವಾದಿಯರು

ಉಳುಮೆ ಮಾಡುತ್ತಾ ಬಂದಿದ್ದಾರೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಯರು ದಾವಾ ಆಸ್ತಿಯಲ್ಲಿ ಸ್ವಾಧೀನ ಇರುವ ವಿಚಾರ ನನಗೆ ಸುಮಾರು 25 ವರ್ಷಗಳಿಂದ ಮಾಹಿತಿ ಇದೆ. ದಾವಾ ಆಸ್ತಿಯ ಬಗ್ಗೆ ನನಗೆ ಸಂಪೂರ್ಣವಾಗಿ ಮಾಹಿತಿ ಇಲ್ಲ ಎಂದರೆ ಸರಿ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಹೇಳಿರುವ ಅಂಶಗಳು ಸುಳ್ಳು ಎಂದರೆ ಸರಿಯಲ್ಲ. ದಾವಾ ಆಸ್ತಿಯ ಮಾಲೀಕರು ವಾದಿಯರು ಹಾಗೂ ಅವರೇ ಸ್ವಾಧೀನದಲ್ಲಿ ಇದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಪಕ್ಕದಲ್ಲಿ ನಮ್ಮ ಜಮೀನು ಇಲ್ಲ ಎಂದರೆ ಸರಿಯಲ್ಲ. ವಾದಿಯರ ಮತ್ತು ನನ್ನ ನಡುವೆ ವೈಷಮ್ಯ ಇರುವುದರಿಂದ ಪ್ರತಿವಾದಿಯರ ಪರವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ .**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ, ಹರಿಹರ